# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್ ರಸ್ತೆ, ತುಮಕೂರು–572 103, ☎: 0816–2255650, 2273511, ಫ್ಯಾಕ್ಸ್:0816–2270719


ಸಂಖ್ಯೆ:ತುವಿ:ಪ.ವಿ:14ನೇ ಘಟಿಕೋತ್ಸವ:2020–21/244 ದಿನಾಂಕ:04.02.2021

## : ಸುತ್ತೋಲೆ :

ವಿಷಯ: ಅಂತಿಮ ರ್‍ಯಾಂಕ್ ಪಟ್ಟಿಯನ್ನು ಪ್ರಕಟಿಸಿರುವ ಕುರಿತು.
ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 01.02.2021

* * * * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ತುಮಕೂರು ವಿಶ್ವವಿದ್ಯಾನಿಲಯದ ಹದಿನಾಲ್ಕನೇ ವಾರ್ಷಿಕ ಘಟಿಕೋತ್ಸವಕ್ಕೆ ವಿವಿಧ ಸ್ನಾತಕ/ಸ್ನಾತಕೋತ್ತರ/ಸ್ನಾತಕ ಶಿಕ್ಷಣ ಪದವಿಗಳಲ್ಲಿ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳ ತಾತ್ಕಾಲಿಕ ರ್‍ಯಾಂಕ್ ಪಟ್ಟಿಯನ್ನು ತುಮಕೂರು ವಿಶ್ವವಿದ್ಯಾನಿಲಯದ ಜಾಲತಾಣ (www.tumkuruniversity.ac.in) ನಲ್ಲಿ ಪ್ರಕಟಿಸಿ, ಈ ಸಂಬಂಧ ಯಾವುದಾದರೂ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ:**27.01.2021** ರೊಳಗೆ ಸಲ್ಲಿಸುವಂತೆ ತಿಳಿಸಲಾಗಿತ್ತು, ಆದರೆ ಸದರಿ ರ್‍ಯಾಂಕ್ ಪಟ್ಟಿ ಕುರಿತಂತೆ ಯಾವುದೇ ಕಾಲೇಜಿನವರು ಆಕ್ಷೇಪಣೆಗಳನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಸದರಿ ಪದವಿಗಳ ಅಂತಿಮ ರ್‍ಯಾಂಕ್ ಪಟ್ಟಿಯನ್ನು ತುಮಕೂರು ವಿಶ್ವವಿದ್ಯಾನಿಲಯದ ಜಾಲತಾಣ (www.tumkuruniversity.ac.in) ನಲ್ಲಿ ಪ್ರಕಟಿಸಲಾಗಿದೆ. ತಮ್ಮ ಕಾಲೇಜಿಗೆ ಅನ್ವಯಿಸುವಂತ ವಿದ್ಯಾರ್ಥಿಗಳು ರ್‍ಯಾಂಕ್ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದರೆ ಅಂತಹ ವಿದ್ಯಾರ್ಥಿಗಳ ಖಾಯಂ ಅಂಚೆ ವಿಳಾಸ, ದೂರವಾಣಿ ಸಂಖ್ಯೆಗಳನ್ನೊಳಗೊಂಡಂತೆ ಇತರೆ ಮಾಹಿತಿಯನ್ನು ಸಂಬಂಧಪಟ್ಟ ಅರ್ಜಿಯಲ್ಲಿ ಭರ್ತಿ ಮಾಡಿ ರ್‍ಯಾಂಕ್ ಪ್ರಮಾಣ ಪತ್ರದ ಶುಲ್ಕ ರೂ. ೩೦೦/- ರೂಪಾಯಿ ಮೂರು ನೂರ ಹತ್ತು ಮಾತ್ರ ಹಾಗೂ ಅರ್ಜಿ ಶುಲ್ಕ ರೂ.೧೦/- ನ್ನು ಪಾವತಿಸಿ ದಿನಾಂಕ:**12.02.2021** ರೊಳಗೆ ಉಪಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸುವಂತೆ ತಿಳಿಸಲಾಗಿದೆ.

**ವಿಶ್ವವಿದ್ಯಾನಿಲಯ ಹೊರಡಿಸಿರುವ ರ್‍ಯಾಂಕ್ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯವು ನಡೆಸುವ ಘಟಿಕೋತ್ಸವ ಸಮಾರಂಭಕ್ಕೂ ಮುಂಚಿತವಾಗಿ ಪತ್ರಿಕಾ ಪ್ರಕಟಣೆ/ಜಾಹೀರಾತು ನೀಡುವುದಾಗಲೀ ಅಥವಾ ಅಂತಹ ವಿದ್ಯಾರ್ಥಿಗಳಿಗೆ ತಮ್ಮ ಕಾಲೇಜುಗಳಲ್ಲಿ ಯಾವುದೇ ರೀತಿಯ ಸಮಾರಂಭವನ್ನು ಏರ್ಪಡಿಸುವುದಾಗಲೀ ಮಾಡುವಂತಿಲ್ಲ ಎಂದು ಈ ಮೂಲಕ ಸೂಚಿಸಲಾಗಿದೆ.**

ಕುಲಸಚಿವ(ಪರೀಕ್ಷಾಂಗ)

ಪ್ರಾಂಶುಪಾಲರು
08/2/21

ಗೆ,

ಪ್ರಾಂಶುಪಾಲರುಗಳು/ಮುಖ್ಯಸ್ಥರುಗಳು, ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ವಿಭಾಗಗಳು/ ಘಟಕ ಕಾಲೇಜು/ ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು

**ಪ್ರತಿಗಳು.**

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – ಇಂದೇ ಜಾಲತಾಣದಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.